ಓ.ಎಸ್. ನಂ. 27/2020

ಪಿ.ಡಬ್ಲ್ಯು: 01 (ದುರುಗಪ್ಪ)

ದಿನಾಂಕಃ 21.06.2025 ರಂದು ಮುಖ್ಯ ವಿಚಾರಣೆಗೆ ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಶ್ರೀ ಕೆ.ಜೆ.ಜಿ ವಕೀಲರಿಂದಃ

ಸಾಕ್ಷ್ಯ ರೂಪದಲ್ಲಿ ಹಾಜರು ಪಡಿಸಿರುವ ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ತಿಳಿದುಕೊಂಡು ನಾನು ನನ್ನ ಸಹಿ ಮಾಡಿದ್ದೇನೆ.

ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿದ ದಾಖಲೆಗಳ ವಿವರ ಈ ಕೆಳಗಿನಂತಿವೆಃ

1. ನನ್ನ ತಂದೆ ನನಗೆ ಬರೆದು ಕೊಟ್ಟ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 01 ಎಂದು ಗುರುತಿಸಲಾಯಿತು.
2. ದಾವಾ ಸ್ವತ್ತಿಗೆ ಸಂಬಂಧಪಟ್ಟ ಮುಟ್ಯೆಶನ್ ದೃಢೀಕೃತ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 02 ಎಂದು ಗುರುತಿಸಲಾಯಿತು.
3. ದಾವಾ ಸ್ವತ್ತಿಗೆ ಸಂಬಂಧಪಟ್ಟ ಎರಡು ಕೈ ಬರಹದ ಪಹಣಿ ಹಾಗೂ ಮೂರು ಗಣಕೀಕೃತ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 03 ಎಂದು ಗುರುತಿಸಲಾಯಿತು.
4. ದಾವಾ ಸ್ವತ್ತಿಗೆ ಸಂಬಂಧಪಟ್ಟ ಸರ್ವೆ ಸ್ಕೇಚಿನ ಯಥ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 04 ಎಂದು ಗುರುತಿಸಲಾಯಿತು.

ಮುಖ್ಯ ವಿಚಾರಣೆಃ ಮುಕ್ತಾಯ.

ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಸಮಯಾವಕಾಶ ನೀಡಲಾಯಿತು.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ಕೂಡ್ಲಿಗಿ.